# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ-161 ಹೊಸಕೆರೆಹಳ್ಳಿ, ಬೆಂಗಳೂರು

ಸಂ: ಸ.ಅ/ವಾ-161/2021-22 ದಿನಾಂಕ : 18-11-2021

## ವಾರ್ಡ್ ಸಮಿತಿಯ ಸಭೆಯ ನಡವಳಿಗಳು

ವಿಷಯ:- ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ :ಬಿ12(58)ಪಿಆರ್/35/2020-21 ದಿನಾಕ :21-09-2020 ರವರ ಆದೇಶದಂತೆ ದಿನಾಂಕ :18-11-2021 ರಂದು ವಾರ್ಡ್ ಸಂಖ್ಯೆ-161 ಹೊಸಕೆರೆಹಳ್ಳಿ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ವಾರ್ಡ್ ಕಮಿಟಿ ಸಭೆ ನಿಗಧಿಪಡಿಸಿ ದಿನಾಂಕ :18-11-2021 ರಂದು ವಾರ್ಡ್ ಕಛೇರಿಯಲ್ಲಿ ಬೆಳಿಗ್ಗೆ 10.30 ಗಂಟೆಗೆ ಶ್ರೀ ಧರಣೇಂದ್ರಕುಮಾರ್ ನೋಡಲ್ ಅಧಿಕಾರಿಗಳು ರವರ ಅಧ್ಯಕ್ಷತೆಯಲ್ಲಿ ಹಾಗೂ ಶ್ರೀ ವೆಂಕಟಮಲವಯ್ಯ.ಕೆ ಸದಸ್ಯ ಕಾರ್ಯದರ್ಶಿ ರವರ ಕಾರ್ಯಾಧ್ಯಕ್ಷತೆಯಲ್ಲಿ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಸಂಬಂಧಿಸಿದ ಅಧಿಕಾರಿಗಳೊಂದಿಗೆ ನಡೆದ ಸಭೆಯ ನಡಾವಳಿಗಳು.

ಸಭೆಯಲ್ಲಿ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಎಲ್ಲಾ ಇಲಾಖೆಯ ಅಧಿಕಾರಿ ವರ್ಗದವರು ಹಾಜರಿರುತ್ತಾರೆ.

ಹಿಂದಿನ ವಾರ್ಡ್ ಸಭೆಯ ನಡಾವಳಿಗಳನ್ನು ಚರ್ಚಿಸಲಾಗಿರುತ್ತದೆ.

1) ತೋಟಗಾರಿಕೆ ಇಲಾಖೆಯ ಉಸ್ತುವಾರಿ ಅಧಿಕಾರಿಗಲು ಸಭೆಗೆ ಹಾಜರಾಗದಿರುವ ಬಗ್ಗೆ ಸದಸ್ಯರು ಪ್ರಸ್ತಾವನೆ ಮಾಡಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ ಮುಂದಿನ ಸಭೆಗೆ ತಪ್ಪದೇ ಹಾಜರಾಗುವಂತೆ ಸೂಚಿಸಿರುತ್ತಾರೆ.
2) ಮಳೆಯಿಂದ ಹಾನಿಯಾಗಿರುವ ರಸ್ತೆಗಳನ್ನು ಸರಿಪಡಿಸಲು ಸದಸ್ಯರು ಸೂಚಿಸಲಾಗಿರುತ್ತದೆ.
3) ಹೊಸಕೆರೆಹಳ್ಳಿಯಲ್ಲಿ ಸಿ.ಸಿ ಕ್ಯಾಮರಾಗಳನ್ನು ಪೋಲೀಸ್ ಇಲಾಖೆಯಿಂದಲೇ ನಿರ್ವಹಿಸುವಂತೆ ಸಭೆಯಲ್ಲಿ ಸದಸ್ಯರು ಸೂಚಿಸಿರುತ್ತಾರೆ.
4) ವಾರ್ಡ್ ಸಂಬಂಧಿಸಿದ ಪೋಲೀಸ್ ಇಲಾಖೆಯ ಮೊಬೈಲ್ ಸಂಖ್ಯೆಗಳನ್ನು ಸಾರ್ವಜನಿಕರ ಅನುಕೂಲಕ್ಕಾಗಿ ತಿಳಿಸಲಾಗಿದೆ. 1) 9480801528 ಗಿರಿನಗರ ಪೋಲೀಸ್ ಠಾಣೆ, 2) 9480801532 ಚೆನ್ನಮ್ಮಕೆರೆ ಅಚ್ಚುಕಟ್ಟು ಪೋಲೀಸ್ ಠಾಣೆ, 3) 9480801929 ಸಂಚಾರಿ ಪೋಲೀಸ್ ಠಾಣೆ
5) ಮತದಾರರ ಗುರುತಿನ ಚೀಟಿಯಲ್ಲಿ ಹೊಸದಾಗಿ ಸಾರ್ವಜನಿಕರನ್ನು ಸೇರಿಸುವುದು ಮತ್ತು ವಾರ್ಡ್‌ನಲ್ಲಿ ಇಲ್ಲದವರನ್ನು ಪಟ್ಟಿಯಿಂದ ತೆಗೆಯುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿದೆ.

ಮಾನ್ಯ ಆಯುಕ್ತರವರ ಸೂಚನೆಯಂತೆ ಪ್ರತಿ ಒಂದನೇ ಹಾಗೂ ಮೂರನೇ ಶನಿವಾರದಂದು ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲು ಹಾಗೂ ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ವಿಭಾಗದ ಅಧಿಕಾರಿಗಳು ಸಭೆಯಲ್ಲಿ ಹಾಜರಿರಲು ಕೋರುತ್ತಾ ಮತ್ತು ಮುಂದಿನ ಸಭೆಯಲ್ಲಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಶನ್ ರವರನ್ನು ಹೆಚ್ಚಿನ ಸಂಖ್ಯೆಯಲ್ಲಿ ಆಹ್ವಾನಿಸಲು ಸಂಚಾಲಕರಿಗೆ ಸೂಚಿಸಿ ಸಭೆಯಲ್ಲಿ ಯಾವುದೇ ಪ್ರಸ್ತಾವನೆ ಮಾಡದಿದ್ದ ಕಾರಣ ನೋಡಲ್ ಅಧಿಕಾರಿ/ಅಧ್ಯಕ್ಷರ ಅಪ್ಪಣೆ ಮೇರೆಗೆ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ವಾರ್ಡ್ ಸಮಿತಿ ಸಂಚಾಲಕರು

ವಾರ್ಡ್ 161 ರ ನೋಡಲ್ ಅಧಿಕಾರಿ.